ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

ಪಟ್ಟಿ–೦೫

# ಕರ್ನಾಟಕ ವಿಧಾನ ಪರಿಷತ್ತು

**ನೂರ ಇಪ್ಪತ್ತಾರನೆಯ ಅಧಿವೇಶನ**

**ಸೋಮವಾರ, ದಿನಾಂಕ: ೧೫ನೇ ಡಿಸೆಂಬರ್, ೨೦೧೪**

---

**ಸಮೂಹ – I**

೧. ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು

೨. ಸಾರಿಗೆ ಸಚಿವರು

೩. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

೪. ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

೫. ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು

೬. ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು

---

**ಬಸ್ ನಿಲ್ದಾಣ ಮಂಜೂರಾತಿ**

**ಶ್ರೀ ಎಸ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು)** –

೬೧ (೭೨೬) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಯಚೂರು ಜಿಲ್ಲೆಯ ಮಾನ್ವಿ ತಾಲ್ಲೂಕಿನ ಕೌತಾಳದಲ್ಲಿ ಹೊಸದಾಗಿ ಬಸ್ ನಿಲ್ದಾಣ (ಎನ್.ಇ.ಕೆ.ಎಸ್.ಆರ್.ಟಿ.ಸಿ.) ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಈ ಗ್ರಾಮದಲ್ಲಿ ಹೊಸದಾಗಿ ಬಸ್ ನಿಲ್ದಾಣಕ್ಕೆ ಯಾವಾಗ ಮಂಜೂರಾತಿ ನೀಡಿ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು ;

(ಇ) ಮಾನ್ವಿ ಪಟ್ಟಣದಲ್ಲಿ ಬಸ್ ಡಿಪೋ ನಿರ್ಮಾಣ ಮಾಡುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ ;

ಈ) ಹಾಗಿದ್ದಲ್ಲಿ, ಬಸ್ ಡಿಪೋ ನಿರ್ಮಾಣ ಕಾಮಗಾರಿಗೆ ಯಾವಾಗ ಮಂಜೂರಾತಿ ನೀಡಲಾಗುವುದು ? (ಪೂರ್ಣ ವಿವರ ನೀಡುವುದು)

**ನಾಗರಿಕ ಹಕ್ಕು ಜಾರಿ ನಿರ್ದೇಶನಾಲಯ**

**ಶ್ರೀಮತಿ ತಾರಾ ಅನೂರಾಧ (ನಾಮನಿರ್ದೇಶನ ಹೊಂದಿದವರು) –**

೬೨ (೭೮೨) ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ನಾಗರಿಕ ಹಕ್ಕು ಜಾರಿ ನಿರ್ದೇಶನಾಲಯದ ಸ್ಥಾಪನೆ ಉದ್ದೇಶ, ನಿಗದಿಪಡಿಸಿರುವ ಕರ್ತವ್ಯ/ಜವಾಬ್ದಾರಿಗಳು/ ಅಧಿಕಾರಗಳು/ ಜಾರಿ ಮಾಡಲು ನೀಡಿರುವ ಕಾಯಿದೆಗಳು/ಕಾಯಿದೆಗಳಲ್ಲಿನ ಮುಖ್ಯಾಂಶಗಳ ವಿವರಗಳನ್ನು ಒದಗಿಸುವುದು ;

(ಆ) ಈ ಸಂಸ್ಥೆ ಸ್ಥಾಪಿಸಿದ ದಿನದಿಂದ ಈವರೆಗಿನ ಕಾರ್ಯಗಳ ಬಗ್ಗೆ ಸಂಕ್ಷಿಪ್ತ ವಿವರಗಳನ್ನು ಒದಗಿಸುವುದು ;

(ಇ) ಈ ಸಂಸ್ಥೆ ಹಲ್ಲಿಲ್ಲದ ಹಾವು ಎಂದು ಪರಿಶಿಷ್ಠ ಜಾತಿ/ ವರ್ಗದವರು ಮತ್ತು ಸಾರ್ವಜನಿಕರು ಅಭಿಪ್ರಾಯಗಳನ್ನು ವ್ಯಕ್ತಪಡಿಸುತ್ತಿದ್ದಾರೆ. ಈ ಬಗ್ಗೆ ಸರ್ಕಾರದ ಅಭಿಪ್ರಾಯಗಳನ್ನು ತಿಳಿಸುವುದು ;

(ಈ) ಕೆಲ ಸವರ್ಣೀಯರು ಈಗಲೂ ದಲಿತರ ಮೇಲಿನ ದೌರ್ಜನ್ಯಗಳನ್ನು ಮುಂದುವರೆಸಿದ್ದಾರೆ. ಆ ದೌರ್ಜನ್ಯಗಳನ್ನು ಹತ್ತಿಕ್ಕುವ ಶಕ್ತಿ ಈ ಸಂಸ್ಥೆಗೆ ಇಲ್ಲವಾಗಿದೆ, ಈ ಸಂಸ್ಥೆಯನ್ನು ಮತ್ತಷ್ಟು ಶಕ್ತಿಯುತಗೊಳಿಸಲು ಸರ್ಕಾರ ಚಿಂತಿಸುವುದೇ ?

**ಬೀದರ್–ಬೆಂಗಳೂರು (ಹೈದರಾಬಾದ್ ಮಾರ್ಗ) ಬಸ್ ಸಂಚಾರ**

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು)–**

೬೩ (೭೩೬) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೀದರ್‌ದಿಂದ ಹೈದರಾಬಾದ್ ಮಾರ್ಗವಾಗಿ ಬೆಂಗಳೂರಿಗೆ ಒಟ್ಟು ಎಷ್ಟು ಬಸ್ಸುಗಳು ಸಂಚರಿಸುತ್ತಿವೆ ; (ಬಸ್ಸುಗಳ ವಿವರ ನೀಡುವುದು)

(ಆ) ಬೀದರ್ ದಿಂದ ಬೆಂಗಳೂರಿಗೆ (ಹೈದರಾಬಾದ್ ನಗರದ ಬಸ್ ನಿಲ್ದಾಣಕ್ಕೆ ಹೋಗದೆ) ನೇರವಾಗಿ ಹೈದರಾಬಾದ್ ರಿಂಗ್ ರಸ್ತೆಯ ಮೂಲಕವೇ ಹೋಗಲು ಹೊಸದಾಗಿ ಎಸಿ.ಸ್ಲೀಪರ್ ಬಸ್ ಓಡಿಸುವುದರಿಂದ ಬೀದರ್ ಜನರಿಗೆ ಬೆಂಗಳೂರಿಗೆ ಹೋಗಲು ಮತ್ತು ಬರಲು ಸರಿಯಾದ ಸಮಯಕ್ಕೆ ಬಂದು ತಲುಪಲು ಅನುಕೂಲವಾಗುತ್ತದೆ. ಈ ಅನುಕೂಲ ಮಾಡಿಕೊಡಲು ಸರ್ಕಾರವು ಯಾವ ಕ್ರಮ ಕೈಗೊಳ್ಳುವುದು ? (ವಿವರ ನೀಡುವುದು)

## ಗ್ರಾಹಕರುಗಳು ವಂಚಿತರಾಗುತ್ತಿರುವುದು

**ಶ್ರೀ ದಯಾನಂದ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೬೪ (೮೧೭) ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಳ್ಳಿ, ಬಂಗಾರ, ರತ್ನ ಹಾಗೂ ಇನ್ನಿತರೆ ಬೆಲೆ ಬಾಳುವ ಆಭರಣಗಳ ಗುಣಮಟ್ಟವನ್ನು ಪರೀಕ್ಷಿಸಲು ಸರ್ಕಾರದ ಮಾನದಂಡಗಳೇನು ;

(ಆ) ಗ್ರಾಹಕರುಗಳು ಇತ್ತೀಚಿನ ದಿನಗಳಲ್ಲಿ ಆಭರಣ ಮಳಿಗೆಗಳಿಂದ ಖರೀದಿಸಿದಾಗ ವಂಚನೆಗಳಿಗೆ ಒಳಪಡುತ್ತಿರುವ ಸಂಖ್ಯೆಯು ಹೆಚ್ಚುತ್ತಿರುವುದರಿಂದ, ವಂಚನೆಗಳನ್ನು ತಡೆಗಟ್ಟುವಲ್ಲಿ ಸರ್ಕಾರ ಕೈಗೊಳ್ಳುವ ಕ್ರಮಗಳೇನು ;

(ಇ) ಗ್ರಾಹಕರುಗಳು ಇತ್ತೀಚೆಗೆ ವಂಚನೆಗಳಿಗೆ ಒಳಗಾಗಿ ಪ್ರಕರಣಗಳನ್ನು ದಾಖಲಾತಿ ಮಾಡಿರುವ ಸಂಖ್ಯೆ ಎಷ್ಟು ; ಇಂತಹ ಪ್ರಕರಣಗಳನ್ನು ಪತ್ತೆ ಹಚ್ಚಿ ಇಲ್ಲಿಯವರೆಗೆ ಎಷ್ಟು ಮಳಿಗೆಗಳ ಮೇಲೆ ಸರ್ಕಾರವು ಕಾನೂನು ಕ್ರಮ ಕೈಗೊಂಡಿದೆ ? (ಪೂರ್ಣ ವಿವರಗಳನ್ನು ನೀಡುವುದು)

## ಶಾಸಕರ ಭವನದಲ್ಲಿ ಆಯುಷ್ ಪಂಚಕರ್ಮ ವಿಭಾಗ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) –**

೬೫ (೧೯೬) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಶಾಸಕರ ಭವನದಲ್ಲಿ ಆಯುರ್ವೇದ ವೈದ್ಯಕೀಯ ಪಂಚಕರ್ಮ ವಿಭಾಗ ತೆರೆದಿರುವುದು ನಿಜವೇ ;

(ಆ) ನಿಜವಾಗಿದ್ದರೆ, ಈ ವಿಭಾಗಕ್ಕೆ ವಿವಿಧ ದರ್ಜೆಯ ಮಂಜೂರಾಗಿರುವ ವೈದ್ಯಕೀಯ ಸಿಬ್ಬಂದಿಯ ಸಂಖ್ಯೆ ಮತ್ತು ವಿವರವನ್ನು ತಿಳಿಸುವುದು ;

(ಇ) ಮಂಜೂರಾಗಿರುವ ಹುದ್ದೆಗಳು ಖಾಯಂ ಅಥವಾ ಗುತ್ತಿಗೆ ಆಧಾರದ ಹುದ್ದೆಗಳೋ ;

(ಈ) ಈ ಪಂಚಕರ್ಮ ವಿಭಾಗವನ್ನು ಜಿಮ್ ರೀತಿ ಸಿಬ್ಬಂದಿ ಮತ್ತು ಔಷಧಿ ವೆಚ್ಚವನ್ನು ಶಾಸಕಾಂಗ ಆಯವ್ಯಯದಲ್ಲಿ ಸೇರಿಸಿ ಆಸ್ಪತ್ರೆಯನ್ನು ಶಾಸಕಾಂಗ ಅಧೀನದಲ್ಲಿ ನಡೆಸುವುದು ಉಚಿತವಲ್ಲವೇ ;

(ಉ) ಈ ಬಗ್ಗೆ ಸರ್ಕಾರದ ನಿಲುವೇನು ? (ತಿಳಿಸುವುದು)

## ಅಲೆಮಾರಿ / ಅರೆ–ಅಲೆಮಾರಿ ಜನಾಂಗದ ಅಭಿವೃದ್ಧಿಗೆ ವಿಶೇಷ ಪ್ಯಾಕೇಜ್

**ಶ್ರೀಮತಿ ಜಯಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) –**

೬೬ (೭೬೭) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅಲೆಮಾರಿ/ಅರೆ ಅಲೆಮಾರಿ ಜನಾಂಗದ ಅಭಿವೃದ್ಧಿಗಾಗಿ ವಿಶೇಷ ಪ್ಯಾಕೇಜ್ ಘೋಷಿಸುವ ಉದ್ದೇಶ ಸರ್ಕಾರಕ್ಕಿದೆಯೇ ;

(ಆ) ಇದ್ದಲ್ಲಿ, ಸದರಿ ಪ್ಯಾಕೇಜನ್ನು ಯಾವಾಗ ಕಾರ್ಯರೂಪಕ್ಕೆ ತರಲಾಗುವುದು?

## ಸಾರಿಗೆ ಸಂಸ್ಥೆಯ ಬಸ್ಸುಗಳಲ್ಲಿ ಜಾಹಿರಾತು

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೬೭ (೭೮೯) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಹಾಗೂ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯನ್ನೊಳಗೊಂಡಂತೆ ಇರುವ ಒಟ್ಟು ಬಸ್ಸುಗಳ ಸಂಖ್ಯೆ ಎಷ್ಟು; (ವಿಭಾಗವಾರು ವಿವರಗಳನ್ನು ನೀಡುವುದು)

(ಆ) ಬಸ್ಸಿನ ಮೇಲ್ಭಾಗದ ಗ್ಲಾಸುಗಳ ಮೇಲೆ ಜಾಹಿರಾತು ಅಳವಡಿಕೆಯಿಂದಾಗಿ ಪ್ರತಿವರ್ಷ ಸರ್ಕಾರದ ಬೊಕ್ಕಸಕ್ಕೆ ಬರುತ್ತಿರುವ ಆದಾಯದ ಮೊತ್ತವೆಷ್ಟು; (ವಿಭಾಗಾವಾರು ಮಾಹಿತಿ ನೀಡುವುದು)

(ಇ) ಬೆಂಗಳೂರು ನಗರ ಸಾರಿಗೆ ಬಸ್ಸುಗಳು ಹಾಗೂ ಇನ್ನಿತರೆ ವಿಭಾಗಗಳ ಬಸ್ಸುಗಳ ಸುತ್ತಲೂ ಜಾಹಿರಾತು ಫಲಕಗಳನ್ನು ಅಳವಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಈ ಜಾಹಿರಾತು ಫಲಕಗಳ ಅಳವಡಿಕೆಯಿಂದಾಗಿ ಬಸ್ಸಿನಲ್ಲಿ ಪ್ರಯಾಣಿಸುವ ಸಾರ್ವಜನಿಕರಿಗೆ ಅದರಲ್ಲೂ ನಿಂತು ಪ್ರಯಾಣಿಸುವವರಿಗೆ ಯಾವ ಸ್ಥಳದಲ್ಲಿ ಇಳಿಯಬೇಕೆಂಬುದು ಕಾಣಿಸದೆ ಇರುವುದರಿಂದ ಇನ್ನಾವುದೋ ಬೇರೆ ಸ್ಥಳದಲ್ಲಿ ಇಳಿದು ತೊಂದರೆ ಪಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಹಾಗಿದ್ದಲ್ಲಿ, ಜಾಹಿರಾತು ಫಲಕಗಳನ್ನು ಕೂಡಲೇ ರದ್ದುಗೊಳಿಸಲು ಅಥವಾ ಸಾರ್ವಜನಿಕ ಪ್ರಯಾಣಿಕರಿಗೆ ಅಡಚಣೆಯಾಗದಂತೆ ಸರ್ಕಾರ ಕೈಗೊಳ್ಳುವ ಕ್ರಮಗಳೇನು ?

## ಜಿಲ್ಲಾ ಮಟ್ಟದಲ್ಲಿ ನಡೆಸುವ ಆರ್.ಟಿ.ಎ. ಸಭೆಗಳು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೬೮ (೫೩) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಜಿಲ್ಲಾ ಮಟ್ಟದಲ್ಲಿ ರಸ್ತೆ ಸಾರಿಗೆ ಪ್ರಾಧಿಕಾರದ ಆರ್.ಟಿ.ಎ. (RTA) ಸಭೆಯನ್ನು ಕನಿಷ್ಟ ಎಷ್ಟು ತಿಂಗಳಿಗೊಮ್ಮೆ ಕರೆಯಬೇಕೆಂದು ಸರ್ಕಾರ ನಿಗಧಿಪಡಿಸಿದೆ;

(ಆ) ಕಳೆದ ಮೂರು ವರ್ಷಗಳಲ್ಲಿ ಯಾವ, ಯಾವ ಜಿಲ್ಲೆಗಳಲ್ಲಿ ಎಷ್ಟು ರಸ್ತೆ ಸಾರಿಗೆ ಪ್ರಾಧಿಕಾರದ ಸಭೆಗಳನ್ನು ನಡೆಸಲಾಗಿದೆ ; ಎಷ್ಟು ಪ್ರಕರಣಗಳನ್ನು ಇತ್ಯರ್ಥ ಪಡಿಸಲಾಗಿದೆ ; (ವರ್ಷವಾರು, ಜಿಲ್ಲಾವಾರು, ಪ್ರಕರಣವಾರು ವಿವರ ನೀಡುವುದು)

(ಇ) ರಾಜ್ಯದಲ್ಲಿ ಸಾರ್ವಜನಿಕರ ಅನುಕೂಲಕ್ಕಾಗಿ ರಾಷ್ಟ್ರೀಕರಣವಲ್ಲದ ಮಾರ್ಗಗಳನ್ನು ರಾಷ್ಟ್ರೀಕರಣ ಮಾಡುವ ಯೋಜನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ ಪ್ರಕ್ರಿಯೆಯನ್ನು ಎಂದಿನಿಂದ ಪ್ರಾರಂಭ ಮಾಡಲಾಗುವುದು ?

## ಬಸ್ ಪ್ರಯಾಣ ದರ ಇಳಿಸುವುದು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೬೯ (೮೩೬) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ ಜೂನ್ ತಿಂಗಳಿನಿಂದ ಡೀಸೆಲ್ ಬೆಲೆಯಲ್ಲಿ ಇಳಿಕೆಯಾಗಿರುವುದು ನಿಜವೇ ;

(ಆ) ನಿಜವಾದಲ್ಲಿ, ಎಷ್ಟು ಬಾರಿ ಎಷ್ಟು ಪ್ರಮಾಣದಲ್ಲಿ ಇಳಿಕೆಯಾಗಿದೆ ವಿವರ ನೀಡುವುದು ;

(ಇ) ಡೀಸೆಲ್ ಬೆಲೆ ಏರಿಕೆಯ ಕಾರಣದಿಂದ ಈ ವರ್ಷದಲ್ಲಿ ಬಸ್ ಪ್ರಯಾಣ ದರದಲ್ಲಿ ಏರಿಕೆ ಮಾಡಿದ್ದು ನಿಜವೇ ; ಮಾಡಿದ್ದಲ್ಲಿ, ಡೀಸೆಲ್ ಏರಿಕೆಯ ಪ್ರಮಾಣವೇನು ; ಬಸ್ ಪ್ರಯಾಣ ದರ ಏರಿಕೆಯ ಪ್ರಮಾಣವೇನು ; (ವಿವರ ನೀಡುವುದು)

(ಈ) ಈಗ ಬೆಲೆ ಇಳಿಕೆಯಾಗಿರುವಾಗ ಬಸ್ ಪ್ರಯಾಣ ದರವನ್ನು ಇಳಿಕೆ ಮಾಡಲಾಗುವುದೇ ; ಇಲ್ಲವಾದಲ್ಲಿ ಕಾರಣವೇನು ?

## ಬಸ್ ಡಿಪೋ ನಿರ್ಮಾಣ ಕಾರ್ಯದಲ್ಲಿ ವಿಳಂಬ

**ಶ್ರೀ ಸಿ.ಹೆಚ್. ವಿಜಯಶಂಕರ (ವಿಧಾನಸಭೆಯಿಂದ ಚುನಾಯಿತರಾದವರು) –**

೭೦ (೭೪೭) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಜಿಲ್ಲೆ, ಪಿರಿಯಾಪಟ್ಟಣ ತಾಲ್ಲೂಕು ಪಟ್ಟಣ ವ್ಯಾಪ್ತಿಯಲ್ಲಿ ಸ್ಥಳೀಯ ಬೇಡಿಕೆಗೆ ಅನುಗುಣವಾಗಿ ಬಸ್ ಡಿಪೋ ಕೆಲಸ ಪ್ರಾರಂಭಿಸಲು ನಿಗಮಕ್ಕೆ ಜಾಗ ಲಭ್ಯವಿರುವುದಲ್ಲದೆ ಕೆಲಸ ಪ್ರಾರಂಭಿಸಲು ಈ ಹಿಂದೆಯೇ ಆಡಳಿತಾತ್ಮಕ ಒಪ್ಪಿಗೆ ನೀಡಿರುವುದು ನಿಜವೇ ;

(ಆ) ಹಾಗಿದ್ದಲ್ಲಿ, ಸದರಿ ಬಸ್ ಡಿಪೋ ಕೆಲಸ ಪ್ರಾರಂಭಿಸಲು ನಿಗಮಕ್ಕೆ ಅಥವಾ ಇಲಾಖೆಗೆ ಇರುವ ತೊಡಕುಗಳೇನು ;

(ಇ) ನಿಗಮ ಒಪ್ಪಿಗೆ ನೀಡಿದ್ದ ಪಕ್ಷದಲ್ಲಿ ಸದರಿ ಡಿಪೋ ಕೆಲಸವನ್ನು ಎಷ್ಟು ದಿನಗಳಲ್ಲಿ ಪ್ರಾರಂಭಿಸಲಾಗುವುದು ? (ವಿವರಗಳನ್ನು ಒದಗಿಸುವುದು)

## ವಸತಿಶಾಲೆ, ವಸತಿ ನಿಲಯಗಳ, ವಿದ್ಯಾರ್ಥಿನಿಲಯಗಳ ಕ್ಷೌರ ಸೌಲಭ್ಯ

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೭೧ (೮೩೮) ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಮಾಜ ಕಲ್ಯಾಣ ಇಲಾಖೆಯ ಅಧೀನದಲ್ಲಿರುವ ವಸತಿ ಶಾಲೆ, ವಸತಿ ನಿಲಯಗಳಲ್ಲಿನ ವಿದ್ಯಾರ್ಥಿಗಳ ಕ್ಷೌರಕ್ಕಾಗಿ ವಾರ್ಷಿಕ ಪ್ರತಿ ವಿದ್ಯಾರ್ಥಿಗೆ ನೀಡಲಾಗುತ್ತಿರುವ ಅನುದಾನ ಎಷ್ಟು ;

(ಆ) ಹಿಂದುಳಿದ ವರ್ಗಗಳ ಹಾಗೂ ಅಲ್ಪಸಂಖ್ಯಾತರ ಇಲಾಖೆಯ ಅಧೀನದಲ್ಲಿರುವ ವಸತಿ ಶಾಲೆ, ವಸತಿ ನಿಲಯಗಳಲ್ಲಿನ ವಿದ್ಯಾರ್ಥಿಗಳ ಕ್ಷೌರಕ್ಕಾಗಿ ವಾರ್ಷಿಕ ಪ್ರತಿ ವಿದ್ಯಾರ್ಥಿಗೆ ನೀಡಲಾಗುತ್ತಿರುವ ಅನುದಾನ ಎಷ್ಟು ;

(ಇ) ಎರಡೂ ಇಲಾಖೆಗಳ ವಸತಿ ಶಾಲೆ, ವಸತಿ ನಿಲಯಗಳ ಅಧೀನದಲ್ಲಿರುವ ವಿದ್ಯಾರ್ಥಿಗಳ ಕ್ಷೌರಕ್ಕೆ ನೀಡಲಾಗುತ್ತಿರುವ ಅನುದಾನದಲ್ಲಿ ಅಧಿಕ ವ್ಯತ್ಯಾಸವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಕಳೆದ ಎರಡೂ ಅಧಿವೇಶನಗಳಲ್ಲಿ ಈ ಕುರಿತು ಪ್ರಸ್ತಾಪಿಸಿದಾಗ ಕೂಡಲೇ ಕ್ರಮ ವಹಿಸಿ ವ್ಯತ್ಯಾಸವನ್ನು ಸರಿಪಡಿಸುವುದಾಗಿ ನೀಡಿದ ಭರವಸೆಯನ್ನು ಈಡೇರಿಸದೇ ಇರುವುದಕ್ಕೆ ಕಾರಣಗಳೇನು ?

## ನ್ಯಾಯಬೆಲೆ ಅಂಗಡಿಗಳ ಗಣಕೀಕೃತ ತೂಕದಯಂತ್ರ ಅಳವಡಿಕೆ

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೭೨ (೭೯) ಆಹಾರ ಮತ್ತು ನಾಗರಿಕರ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ಪಡಿತರ ವ್ಯವಸ್ಥೆಯನ್ನು ಸುಧಾರಿಸಲು ಪ್ರಾಯೋಗಿಕವಾಗಿ ಏಳು ಜಿಲ್ಲೆಗಳಲ್ಲಿ ಜಾರಿಗೊಳಿಸಿರುವ ''ಗಣಕೀಕೃತ ತೂಕದ ಯಂತ್ರ'' ಬಳಕೆಯು ಯಶಸ್ವಿಯಾಗಿದೆಯೇ ಹೇಗೆ ; ಯಶಸ್ವಿಯಾಗಿದ್ದಲ್ಲಿ, ಉಳಿದ ಜಿಲ್ಲೆಗಳಿಗೆ ಈ ಯೋಜನೆಯನ್ನು ವಿಸ್ತರಿಸುವ ಯೋಜನೆ ಸರ್ಕಾರದಲ್ಲಿದೆಯೇ ?

## ನಿರ್ಗತಿಕರಿಗಾಗಿ ಸೇವಾ ಸಂಸ್ಥೆಗಳಿಂದ ಹಣ ಸಂಗ್ರಹ

**ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) –**

೭೩ (೧೨೦) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿರುವ ಭಿಕ್ಷುಕರು, ಅನಾಥರ ಅಂದಾಜು ಸರ್ಕಾರಕ್ಕೆ ಇದೆಯೇ ; ಹಾಗಿದ್ದಲ್ಲಿ, ಜಿಲ್ಲಾವಾರು ಪ್ರತ್ಯೇಕ ಮಾಹಿತಿ ಒದಗಿಸುವುದು ;

(ಆ) ಭಿಕ್ಷುಕರ, ನಿರ್ಗತಿಕರ ಅನಾಥರ ಕುರಿತಾಗಿ ಸೇವೆ ಸಲ್ಲಿಸುತ್ತಿರುವ ಸ್ವಯಂ ಸೇವಾ ಸಂಘಟನೆಗಳ ಬಗ್ಗೆ ಸರ್ಕಾರಕ್ಕೆ ಮಾಹಿತಿ ಇದೆಯೇ ; ಇದ್ದಲ್ಲಿ ಸಂಪೂರ್ಣ ವಿವರ ಒದಗಿಸುವುದು ;

(ಇ) ನಿರ್ಗತಿಕರ ಹೆಸರಿನಲ್ಲಿ ಹಣ ಸಂಗ್ರಹಿಸುವ ಮತ್ತು ಅಂತರರಾಷ್ಟ್ರೀಯ ಮಟ್ಟದಲ್ಲಿ ದೇಶದ, ರಾಜ್ಯದ ಮರ್ಯಾದೆಯನ್ನು ಕಡಿಮೆಗೊಳಿಸುತ್ತಿರುವ ಸಂಘ–ಸಂಸ್ಥೆಗಳ, ವ್ಯಕ್ತಿಗಳ ಕುರಿತಾಗಿ ಸರ್ಕಾರವು ಗಂಭೀರವಾಗಿ ಆಲೋಚಿಸಿದೆಯೇ; ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಕೈಗೊಂಡ ಕ್ರಮಗಳ ಬಗ್ಗೆ ಮಾಹಿತಿ ಒದಗಿಸುವುದು;

(ಈ) ಭಿಕ್ಷಾಟನೆಯನ್ನು ನಿವಾರಿಸುವ ಮತ್ತು ಭಿಕ್ಷಾಟನೆಗೆ ಪ್ರೋತ್ಸಾಹಿಸುವ ವ್ಯಕ್ತಿ, ಸಂಸ್ಥೆಗಳ ಬಗ್ಗೆ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ? (ಮಾಹಿತಿ ಒದಗಿಸುವುದು)

## ತಾಯಂದಿರ ಮರಣ ಪ್ರಮಾಣ ಹೆಚ್ಚುತ್ತಿರುವುದು

**ಡಾ॥ ಮತ್ತಿಕಟ್ಟಿ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –**

೭೪ (೮೪೮) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಮಗುವಿಗೆ ಜನ್ಮ ನೀಡುವ ಸಂದರ್ಭದಲ್ಲಿ ತಾಯಂದಿರ ಮರಣ ಪ್ರಮಾಣ ಹೆಚ್ಚಾಗುತ್ತಿದ್ದು ಅದರಲ್ಲಿ ಕಲಬುರಗಿ ಜಿಲ್ಲೆ ಪ್ರಥಮ ಸ್ಥಾನ ಹೊಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ತಾಯಂದಿರ ಮರಣ ಪ್ರಮಾಣವನ್ನು ಕಡಿಮೆ ಮಾಡಲು ಸರ್ಕಾರವು ಕೈಗೊಳ್ಳುತ್ತಿರುವ ಕ್ರಮಗಳೇನು ; (ವಿವರಿಸುವುದು)

(ಇ) ಉತ್ತರ ಕರ್ನಾಟಕದ ಜಿಲ್ಲೆಗಳಲ್ಲಿನ ತಾಯಂದಿರ ಮರಣ ಪ್ರಮಾಣವನ್ನು ತಗ್ಗಿಸಲು ''ವಿಶೇಷ'' ಯೋಜನೆಗಳನ್ನು ಹಮ್ಮಿಕೊಳ್ಳಲಾಗುವುದೇ ?

## ವೈದ್ಯಾಧಿಕಾರಿ ಹಾಗೂ ಸೂಪರ್ ಸ್ಪೆಷಾಲಿಟಿ ವೈದ್ಯರ ಹುದ್ದೆಗಳ ಭರ್ತಿ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) –**

೭೫ (೭೬೫) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಎಷ್ಟು ಮೆಡಿಕಲ್ ಆಫೀಸರ್ ಹಾಗೂ ಸೂಪರ್ ಸ್ಪೆಷಾಲಿಟಿ ಡಾಕ್ಟರ್ ಹುದ್ದೆಗಳು ಖಾಲಿ ಇರುತ್ತವೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಇವುಗಳನ್ನು ತುಂಬಲು ಯಾವ ಕ್ರಮ ಕೈಗೊಳ್ಳಲಾಗಿದೆ ;

(ಇ) ಮೆಡಿಕಲ್ ಕಾಲೇಜುಗಳಲ್ಲಿ ಪ್ರವೇಶ ಪಡೆಯುವ ವಿದ್ಯಾರ್ಥಿಗಳು ಮೆಡಿಕಲ್ ವಿದ್ಯಾಭ್ಯಾಸ ಮುಗಿದ ನಂತರ ಗ್ರಾಮೀಣ ಪ್ರದೇಶದಲ್ಲಿ ಸೇವೆ ಸಲ್ಲಿಸುವುದಾಗಿ ಮುಚ್ಚಳಿಕೆ ಬರೆದು ಕೊಟ್ಟರೂ ಸಹ ಗ್ರಾಮೀಣ ಪ್ರದೇಶದಲ್ಲಿ ಸೇವೆ ಸಲ್ಲಿಸದೇ ಇರುವ ಸಂಗತಿ ನಿಜವೇ, ಅಂಥವರ ಮೇಲೆ ಸರ್ಕಾರ ಯಾವ ಕ್ರಮ ಕೈಗೊಂಡಿರುತ್ತದೆ ?

**ವಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಪಿ7, ಕಾ.ಸೂ. 835, ಪ್ರತಿಗಳು 1500